ದಿವಾಳಿಯಾದ ಡಿಕ್ರಿ ದೇಣೆದಾರ ಮೈಸೂರು ಮಂಡಿ ಮೊಹಲಾದಲ್ಲಿರುವ ಬುರಾನೊರ್ದಿನ್ಸಾಬರ ವಿಷಯದಲ್ಲಿ—

ಸರ್ 1894—95ನೇ ಇಸವಿ ದಿವಾಳಿ ಕೇಸ್ ನಂಬರು 38.

ಹುಕುಂ,

ಮೇಲ್ಕಂಡ ಬುರಾನೊರ್ದಿನ್ಸಾಬರು ನಿರ್ಬಂಧದಿಂದ ಖುಲಾಸೆಯಾಗಬೇಕೆಂದು ಕೊಟ್ಟ ಅರ್ಜಿ ಅಂಶವು ಈ ಕೋರ್ಟಿನ ರೂಬರೂ ಅರ್ಜಿದಾರರಾದ ಬುರಾನೊರ್ದಿನ್ಸಾಬರ ಪರವಾಗಿ ಅಡ್ವೊಕೇಟ್ ಮಿಸ್ಟರ್ ರಾಜಾರಾಯರನ್ನೂ ಮತ್ತು ಸದರೀಯವರ ಲೇಣೇದಾರರಾದ 1 ಸಾವಲ್ದಾಸ್ ಜಠಾನಂದಸೇಟರ ತರಫ್ ಅಡ್ವೊಕೇಟ್ ಮಿಸ್ಟರ್ ಚಂದ್ರಶೇಖರಯ್ಯನವರಿಗೂ ದರ್ಯಾಫ್ತಿ ಮಾಡಲ್ಪಟ್ಟಿತು.

ಈ ಕೆಳಗೆ ನಮೂದು ಮಾಡಲ್ಪಡುವ ಲೇಣೇದಾರರು ತಮಗೆ ಈ ದರ್ಯಾಫ್ತಿ ನೋಟಿಸ್ ಜಾರಿಯಾಗಿದ್ದಾಗ್ಯೂ ಖುದ್ದಾಗಿಯಾಗಲಿ ಅಥವ ಲಾಯರ್ ಮೂಲಕವಾಗಿಯಾಗಲಿ ಹಾಜರಾಗುವದಕ್ಕೆ ತಪ್ಪಿ ಹೋದರು ಯಾಕಂದರೆ—2ನೇ ಲೈಫ್ ಇನ್ಷೂರೆನ್ಸ್ ಬ್ಯಾಂಕ್, 3ನೇ ಸಾಹುಕಾರ್ ವೀರಣ್ಣ, 4ನೇ ಸಾಲೆಮಹಮ್ಮದ್‌ಸೇಟ್, 5ನೇ ದೇವೀರಮ್ಮ, 6ನೇ ಚವುಡಪ್ಪ, 7ನೇ ದವಾಜಿರ್ಕಾಜಿಸೇಟ್, 8ನೇ ಅನಂತರಾಮಯ್ಯಂಗಾರ್, 9ನೇ ಜಮಾಲ್‌ಸಾಬ್, 10ನೇ ವೀರಪ್ಪ, 11ನೇ ಸುಬ್ಬರಾಜೆಅರಸ್, 12ನೇ ವರದಾಚಾರ್.

ಸಿವಿಲ್ ಪ್ರೊಸಿಡ್ಯೂರ್ ಕೋಡಿನ 20ನೇ ಅಧ್ಯಾಯದ ನಿರೂಪಣೆಗಳ ಫಲವನ್ನು ಸದರೀ ಬುರಾನೊರ್ದಿನ್ಸಾಬರು ಹೊಂದುವದಕ್ಕೆ ಹಕ್ಕುದಾರರಾಗುವದರ ಮೂಲಕ ದಿವಾಳಿಯಾದವರೆಂದು ತೀರ್ಮಾನಿಸಲ್ಪಟ್ಟಿರುತ್ತೆಯಾಗಿ ಸದರೀ ದಿವಾಳಿಯಾದವರನ್ನು ನಿರ್ಬಂಧದಿಂದ ವಿಮೋಚನೆ ಮಾಡಿರುವದಲ್ಲದೆ ಇದಕ್ಕೆ ಲಗತ್ತಾಗಿರುವ ಪಟ್ಟಿಯಲ್ಲಿ ಕಂಡ ಯಾವ ಸಾಲಕ್ಕೋಸ್ಕರವಾಗಿಯಾಗಲಿ ದಸ್ತಗಿರಿ ಮಾಡಲ್ಪಟ್ಟು ನಿರ್ಬಂಧಪಡುವ ಜವಾಬ್‌ದಾರಿಯಿಂದ ಸಹ ಅವರನ್ನು ನಿಖಾಲಸ್ ಮಾಡಲಾಗಿರುತ್ತೆ ಯೆಂದು ಇದರಿಂದ ಹುಕುಂ ಮಾಡಲ್ಪಟ್ಟಿರುತ್ತೆ.

ಸರ್ 1895ನೇ ಇಸವಿ ಮಾರ್ಚಿ 20ನೇ ತಾರೀಖಿನಲ್ಲಿ ಈ ಕೋರ್ಟಿನ ಮೊಹರ್ ನಮ್ಮ ದಸ್ತಖತ್ತುನಿಸಿ ಕೊಡಲ್ಪಟ್ಟಿತು.

ಸಾಲದಪಟ್ಟಿ,

ನಂಬರ್.	ಲೇಣೇದಾರ್ರು ಅಥವಾ ದಾವಾದಾರ್ರು ಹೆಸರು ಮತ್ತು ವಿವರ ಮತ್ತು ಹಾಲಿ ತಿಳಿಯಬಂದ ಅವರುಗಳ ವಾಸಸ್ಥಳ.	ಮೊಬಲಗು.	ಯಾವಾಗ ದೇಣೆ ವುಂಟಾದದ್ದು.	ದೇಣೆಯ ಸ್ವಭಾವ ಮತ್ತು ಅದರ ಪ್ರತಿಫಲ ಮತ್ತು ಗಿರ್ವಿ ಯೇನಾದರೂ ಇದ್ದರೆ.	ಷರಾ.
1	ಮೈಸೂರಲ್ಲಿರುವ ಸಾವಲ್‌ದಾಸ್ ಜಠಾನಂದಸೇಟರು ..	1,100—0—0			
2	ಮೈಸೂರ್ ಲೈಫ್ ಇನ್ಷೂರೆನ್ಸ್ ಬ್ಯಾಂಕ್ ..	1,100—0—0			
4	ಡಿಟೋ ಸಾಲೆಮಹಮ್ಮದ್‌ಸೇಟರು ..	300—0—0			
5	ಡಿಟೋ ದೇವೀರಮ್ಮ ..	350—0—0			
		2,850—0—0			

ಎಂ. ರಾಮಸ್ವಾಮಯ್ಯರ್,
ಸಬ್ ಜಡ್ಜ್.

ಹಾಸನ ಡಿಸ್ಟ್ರಿಕ್ಟು.

ಮಂಜರಾಬಾದ್ ತಾಲ್ಲೂಕು.

ತಾರೀಖು 20ನೇ ಮಾರ್ಚಿ ಸರ್ 1895ನೇ ಇಸವಿ.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ,—ಮಂಜರಾಬಾದ್ ತಾಲ್ಲೂಕು ಉದೇವಾರ ಗ್ರಾಮದಲ್ಲಿ ಇರುವ ಇದರಡಿ ನಮೂದ್ಮಾಡಿರುವ ಜಮೀನಿಗೆ ಕಾಫೀ ಸಾಗುವಳಿ ಬಗ್ಯಾಗಿ ದರಖಾಸ್ತು ಬಂದಿರೋಣದರಿಂದ ಸರ್ 1895ನೇ ಇಸವಿ ಮೇ ತಾರೀಖು 27ನೇ ಸೋಮವಾರ ಹಗಲು 11 ಘಂಟೆಗೆ ಹಾಸನದ ಡಿಸ್ಟ್ರಿಕ್ಟು ಡೆಪ್ಯುಟಿ ಕಮ್ಮಿಷನರ್ ಸಾಹೇಬರವರ ಮಂಜೂರಾತಿಗೆ ಒಳಪಡಿಸಿ ಹಾಸನ ಡಿಸ್ಟ್ರಿಕ್ಟು ಜನರಲ್ ಅಸಿಸ್ಟೆಂಟ್ ಕಮ್ಮಿಷನರವರ ರೂಬರೂ ಸಕಲೇಶಪುರ ಮೊಕ್ಕಾಂನಲ್ಲಿ ಬಹಿರಂಗವಾದ ಹರಾಜು ಮೂಲಕ ಅವುಗಳು ವಿಕ್ರಯಿಸಲ್ಪಡುವವು.

2. ಮಾಮೂಲ್ ಷರತ್ತುಗಳಿಗೆ ಒಳಪಟ್ಟು ಬಹಿರಂಗವಾದ ಹರಾಜು ಮೂಲಕ ಸದರೀ ಲೀಲಾವ್ ನಡಿಯತಕ್ಕದ್ದು, ಎಕರೆ 1ಕ್ಕೆ 10 ರೂಪಾಯಿಗಳ ಮೇರೆ ಆಗುವ ಅಪ್ಸೆಟ್‌ಪ್ರೈಸ್ ಯಾನೆ ನಿಯಮವಾದ ಸರ್ಕಾರ್ ಸವಾಲಿಗೆ ಮೇಲ್ಪಟ್ಟು ಖಾಯಿಷ್ ಮಾಡುವ ಆಖೈರ್ ಚಡದರಖಾಸ್ತುದಾರನಿಗೆ ಮೂರು ವಾರಗಳಿಂದ ಜಮೀನ್ ಹರಾಜನ್ನು ಖೈದ್ ಮಾಡೋಣಾಗುತ್ತದೆ. ಹರಾಜಿನಲ್ಲಿ ಆ ಜಮೀನ್ ದರಖಾಸ್ತುದಾರನಿಗೆ ಆಗುವ ಪಕ್ಷದಲ್ಲಿ ಆತನಿಂದ ಹಾಜರಾಗಿರುವ ನಿಯಮವಾದ ಸರ್ಕಾರ್ ಸವಾಲ್ ಮೊಬಲಗು (ಅಪ್ಸೆಟ್‌ಪ್ರೈಸ್) ಪೈಕಿ ಯಾ ಚವಥಾ ಹಿಸ್ಸೇ ಡಿಪಾಜಿಟ್ ಮೊಬಲಗನ್ನು ಹರಾಜು ಮೊಬಲಗಿನ ಮೇಲೆ ಶೇಕಡಾ 25 ರೂಪಾಯಿಗಳ ಮೇರೆ ಆಗುವ

ಡಿಪಾಜಿಟ್ ಮೊಬಲಗು ಭರ್ತಿಗೆ ಜಮಾ ಹಿಡಿಯೋಣಾಗುತ್ತೆ. ಆದರೆ ಆ ಜಮೀನನ್ನು ಹರಾಜಿನಲ್ಲಿ ದರಖಾಸ್ತುದಾರನಲ್ಲದ ಇತರರ್ಯಾರಾದರೂ ಪಡದರೆ ದರಖಾಸ್ತುದಾರನ ಷುರೂ ಠೇವಣಿ ಮೊಬಲಗನ್ನು ವಾಪಸ್ ಮಾಡೋಣಾಗುತ್ತದೆ.

3. ಮೇಲ್ಕಂಡ ಅಪ್ಸೆಟ್‌ಪ್ರೈಸ್ ಯಾನೆ ನಿಯಮವಾದ ಸರಕಾರ್ ಸವಾಲ್ ಮೊಬಲಗಿನಲ್ಲಿ ಸರ್ವೆ ಖರ್ಚು ಮೊಬಲಗು ಮತ್ತು ಸರಕಾರಕ್ಕೇನೇ ಯಾವಾಗಲೂ ಇಟ್ಟುಕೊಳ್ಳಲ್ಪಟ್ಟಿರುವ ಸಂದಲ್ ವಿನಹ ಬಾಕಿ ಯಲ್ಲಾ ಮನ್ನಾ ಜಾತಿ ಮರಗಳ ಮೇಲಿನ ಸರಕಾರದ ಹಕ್ಕು ಇವುಗಳು ಅಡಗಿರುತ್ತವೆ.

4. ಹರಾಜು ಮೊಬಲಗು ಪೈಕಿ ಶೇಕಡಾ 25 ರೂಪಾಯಿಗಳ ಮೇರೆ ಆಗುವ ಠೇವಣಿ ಮೊಬಲಗನ್ನು ಹರಾಜ್ ಖಾಯಮಾದವಡನೆಯೇ 2ನೇ ಪ್ಯಾರಾದಲ್ಲಿ ನಮೂದಾಗುವ ಸಂದರ್ಭಾನುಸಾರ ಷುರೂ ಡಿಪಾಜಿಟ್ ಮೊಬಲಗು ಭರ್ತಿಗೆ ವಳಪಟ್ಟು ಆಖೈರ್ ಚಡದರಖಾಸ್ತುದಾರ ಕೊಡತಕ್ಕದ್ದು. ಮತ್ತು ಬಾಕೀ ಹಣವನ್ನು ಜಾರಿಯಲ್ಲಿ ಇರುವ ನಿಬಂಧನೆಗಳಲ್ಲಿ ಯುಕ್ತವಾಗಿರುವಂತೆ ಹರಾಜಿನ ತಾರೀಖು ಲಾಗಾಯತು 15ನೇ ದಿವಸ ಸೂರ್ಯಾಸ್ತಮಯಕ್ಕೆ ಮುಂಚೆಯೇ ಆಖೈರ್ ಚಡದರಖಾಸ್ತುದಾರನು ಪಾವತಿ ಮಾಡತಕ್ಕದ್ದು. ಹಾಗೆ ಚಡದರಖಾಸ್ತುದಾರನು ಡಿಪಾಜಿಟ್ ಅಥವಾ ವಿಕ್ರಯದ ಬಾಕೀ ಮೊಬಲಗನ್ನು ಕೊಡದೆ ತಪ್ಪಿದರೆ ಠೇವಣಿ ಮೊಬಲಗಿನಲ್ಲಿ ಹರಾಜಿನ ಖರ್ಚು ಜಾತಾ ಬಾಕಿ ಉಳಿದದ್ದನ್ನ ಸರ್ಕಾರಕ್ಕೆ ದಂಡವಾಗಿ ತೆಗದುಕೊಳ್ಳಲ್ಪಡುವದು, ಅವನ ಖರ್ಚಿನಿಂದಲೂ ಅವನಿಗೆ ನಷ್ಟಕರವಾಗಿಯೂ ಸದರೀ ಜಮೀನು ಪುನಃ ಹರಾಜು ಮಾಡಲ್ಪಡುವದು. ಎರಡನೇ ಹರಾಜಿನಲ್ಲಿ ಸಂಭವಿಸುವ ನಷ್ಟಕ್ಕೆ ಅವನು ಗುರಿಯಾಗಿರಬೇಕು. ಆದರೆ ಜಾಸ್ತಿ ಏನಾದರೂ ಹುಟ್ಟಿದರೆ ಅದಕ್ಕೆ ಅವನಿಗೆ ಯಾವ ಹಕ್ಕೂ ಇರಲಾರದು. ನಂತರ ನಡದ ಹರಾಜಿನಲ್ಲಿ ಹುಟ್ಟಿದ ಮೊಬಲಗು ಹಣ ಕೊಡಲು ತಪ್ಪಿದಂಥಾ ಷುರೂ ಹರಾಜುದಾರನ ಸವಾಲ್ ಮೊಬಲಗುಗಿಂತಲೂ ಕಮ್ಮಿಯಾದಲ್ಲಿ ಆ ಮೇರೆ ಕಮ್ಮಿಯಾದಷ್ಟು ಮೊಬಲಗನ್ನ ಅವನಿಂದ ರೆವಿನ್ಯೂ ಕಂದಾಯದ ಬಾಕಿಯಂತೆ ವಸೂಲ್ ಮಾಡಲ್ಪಡುವದು.

5. ಈ ನಿಬಂಧನೆಗಳಿಗೆ ವಳಪಟ್ಟು ಹರಾಜಾದ ಜಮೀನನ್ನು ಷುರೂ ಮೂರು ಸಾಲ್ ಆಕಾರವಿಲ್ಲದೆ ಮುಫತ್ತು 4ನೇ 5ನೇ ಸಾಲ್ ಅರ್ಧ ಆಕಾರ 6ನೇ ಸಾಲ್ ಲಾಗಾಯತು ಮತ್ತು ಅನಂತರ ಸಹ ಪೂರಾ ಆಕಾರ ಈ ಮೇರೆ ಕೊಟ್ಟುಕೊಂಡು ಅನುಭವಿಸತಕ್ಕದ್ದು. ಈ ರಿಯಾಯತಿ ಕೊಡುವದಕ್ಕೆ ಮುಂಚೆ ಜಮೀನಿನಲ್ಲಿ ಇರುವ ಸಾಗುವಳಿ ಲಾಯಖ್ ಪ್ರದೇಶವನ್ನು ಸಾಗುವಳಿಗೆ ತರಲು ಪ್ರಾಮಾಣಿಕವಾದ ಪ್ರಯತ್ನ ಮಾಡದೆ ಅದರಲ್ಲಿ ಇರುವ ನಾಟಾವನ್ನು ಕತರಾಯಿಸಿಕೊಂಡೇ ಆಗಲಿ ಅದರಲ್ಲಿ ಯಾವ ಭಾಗವನ್ನಾದರೂ ಪೈಲ್ ಮಾಡಿಯೇ ಆಗಲಿ ಸದರೀ ಜಮೀನಿಗೆ ರಿಯಾಯಿತಿ ಅವಧಿಯಲ್ಲಿ ರಾಜೀನಾಮೆ ಕೊಡುವ ಪಕ್ಷಕ್ಕೆ ಷುರೂ ಸಾಲ್ ಲಾಗಾಯತು ಪೂರಾ ಆಕಾರ ಕೊಡಲುಳ್ಳವನೆಂತ ಬಳಹ ಮೂಲಕವಾಗಿ ಹರಾಜುದಾರನು ಮುಚ್ಚಳಿಕೆಯಿಂದ ಬದ್ಧನಾಗಬೇಕು.

ಸರ್ವೆ ನಂಬರ್.	ದರಖಾಸ್ತುದಾರನ ಹೆಸರು.	ಜಮೀನು ಹೆಸರು ಮತ್ತು ಇರತಕ್ಕ ಸ್ಥಳ.	ಚೆತುರ್ಗಡಿ.	ದರಖಾಸ್ತು ಜಮೀನಿನ,		ಷರಾ.
				ವಿಸ್ತೀರ್ಣ.	ಆಕಾರ.	
197ನೇ ನಂಬರಿನಲ್ಲಿ ಫೋಡಾದ ಹೊಸ ನಂಬರ್420	ಮಹಮದ್ ಹಬಿಬುಲ್ಲಾಸಾಬಿ	ಉದೇವಾರದ ಗ್ರಾಮದ ಗೋಮಾಳದಲ್ಲಿ	(1) ಪೂರ್ವಕ್ಕೆ—ಸರ್ವೆ ನಂಬರ್ 224ನೇ ಜಮೀನು (2) ಪಶ್ಚಿಮಕ್ಕೆ—ಬಾಳಗೋಡು ಗಡಿ (3) ದಕ್ಷಿಣಕ್ಕೆ—ಸರ್ವೆ ನಂಬರ್ 197ನೇ ಗೋಮಾಳ (4) ಉತ್ತರಕ್ಕೆ—ಅರೇಹಳ್ಳಿ ಗಡಿ	ಎಕರೆ 82 ಗುಂಟೆ 27	..	ಖಾಯಂದರ 1-8-0 ಎಕರೆ 1ಕ್ಕೆ ಹಂಗಾಮಿ ದರ 1—0—0 ಡಿಟೊ ಹರಾಜಾದನಂತರ ಚಡದರಖಾಸ್ತುದಾರನ ಇಷ್ಟದಂತೆ ಕಂದಾಯ ದಾಖಲ್ಮಾಡಿಕೊಡುತ್ತೆ.

ತಿಳುವಳಿಕೆ ಷರಾ,—ಒಂದು ಸರ್ವೆ ನಂಬರು ಪೈಕಿ ಕೆಲವು ಜಾಗಾಕ್ಕೆ ದರಖಾಸ್ತು ಬಂದು ಕಚ್ಚಾ ಅಳತೇ ಪ್ರಕಾರ ಅಂದಾಜು ಎಕರೆ ಮೇಲೆ ಅಪ್ಸೆಟಪ್ರೈಸ ವಸೂಲಾದ್ದರಲ್ಲಿ ಕರಾರುವಾಕಾ ಮೋಜಣೀ ಎಕರೆಗೆ ಗಣನೀಯ್ಯವಾದಷ್ಟು ಕಮ್ಮಿ ಜಾಸ್ತೀ ಆದರೆ ಜಾಸ್ತೀ ಎಕರೆ ಸಂಬಂಧ ಅಪ್ಸೆಟಪ್ರೈಸ ವಸೂಲೀ ಕೊಡುವದಕ್ಕೇ ಆಗಲಿ ಕಮ್ಮಿ ಎಕರೆ ಸಂಬಂಧ ವಾಪಸ್ ಪಡಿಯುವದಕ್ಕೇ ಆಗಲಿ ಜಮೀನು ಹಿಡುವಳೀ ದಾರನು ಬದ್ಧ ವ ಅರ್ಹನಾಗಿರಬೇಕು.

ಪಿ. ಎನ್. ಪೂರ್ಣಯ್ಯ,
ಡೆಪ್ಯುಟಿ ಕಮ್ಮಿಷನರ್.

ಹಾಸನ ಡಿಸ್ಟ್ರಿಕ್ಟ್—ಇದರಲ್ಲಿ ನಮೂದಾಗುವ ಸಬ್ ರಿಜಿಸ್ಟ್ರಾರ್ ಆಫೀಸುಗಳಲ್ಲಿ ಈ ಕೆಳಗೆ ನಮೂದಿಸಿರುವ ಬೇವಾರಸ ದಸ್ತೈವಜುಗಳನ್ನು ಕ್ರಮವಾದ ವಾರಸದಾರ್ರಾಗಲಿ ಅಥವಾ ಅಧಿಕಾರ ಹೊಂದಿದ ಮುತಾಲೀಕ್ದಾರಾಗಲಿ ಈ ತಾರೀಖು ಲಾಗಾಯತು ವೊಂದು ತಿಂಗಳ ವಳಗಾಗಿ ಸಬ್ ರಿಜಿಸ್ಟ್ರಾರ್ ಆಫೀಸುಗಳಲ್ಲಿ ಹಾಜರಾಗಿ ವಾಪಸ ಪಡಿಯಬೇಕು. ತಪ್ಪಿದಲ್ಲಿ ರಿಜಿಸ್ಟ್ರೇಷನ್ ಆಕ್ಟು 85ನೇ ಸೆಕ್ಷನ್ ಪ್ರಕಾರ ನಾಶಪಡಿಸಲ್ಪಡುತ್ತೆ.